All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

09.09.2026 2.30 p.m.

<><><><>

ಮುಖ್ಯಾಂಶಗಳು

- ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ನಿವಾಸದ ಮೇಲೆ ಇಡಿ ದಾಳಿ ; ಬೆಂಗಳೂರು, ಗೋವಾ ಸೇರಿದಂತೆ ೧೫ಕ್ಕೂ ಹೆಚ್ಚು ಸ್ಥಳಗಳಲ್ಲಿ ಶೋಧ
- ಜಾರಿ ನಿರ್ದೇಶನಾಲಯದ ದಾಳಿ ರಾಜಕೀಯ ಪ್ರೇರಿತ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ತಮಿಳುನಾಡಿಗೆ ೭ ಟಿಎಂಸಿ ನೀರು ಬಿಡುಗಡೆಗೆ ಆದೇಶ ; ನಾಳೆ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿಲು ಸರ್ಕಾರ ನಿರ್ಧಾರ
- ಕಾವೇರಿ ವಿಷಯದಲ್ಲಿ ರಾಜ್ಯದ ಹಿತ ಕಾಪಾಡುವಲ್ಲಿ ಸರ್ಕಾರ ಸಂಪೂರ್ಣ ವಿಫಲ ; ಬಿಜೆಪಿ ಆರೋಪ
- ಭಾರತ ರತ್ನ ಸಿ.ಎನ್.ಆರ್.ರಾವ್ ಅವರಿಗೆ ಎಸ್ಐಆರ್ ನೋಟಿಸ್ ಜಾರಿ ಮಾಡಿಲ್ಲ ; ಜಿಬಿಎ ಆಯುಕ್ತ ಮಹೇಶ್ವರ್ ರಾವ್ ಸ್ಪಷ್ಟನೆ

<><><><>

ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರ ಬೆಂಗಳೂರು, ಬೆಳಗಾವಿ ನಿವಾಸಗಳ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬೆಂಗಳೂರು, ಬೆಳಗಾವಿಯ ೫ ಕಡೆ ಗೋವಾ ಸೇರಿದಂತೆ ೧೫ಕ್ಕೂ ಹೆಚ್ಚು ಸ್ಥಳಗಳಲ್ಲಿ ಇಡಿ ಶೋಧ ನಡೆಸಿದೆ. ೨೫ಕ್ಕೂ ಹೆಚ್ಚು ಅಧಿಕಾರಿಗಳ ತಂಡ ಸಿಆರ್‌ಪಿಎಫ್ ಭದ್ರತೆಯೊಂದಿಗೆ ಪರಿಶೀಲನೆ ನಡೆಸುತ್ತಿದೆ. ಜಾರಕಿಹೊಳಿ ನಿವಾಸ ಪುತ್ರಿ ಪ್ರಿಯಾಂಕ, ಪುತ್ರ ರಾಹುಲ್, ಸಂಬಂಧಿ ವೈ.ಮಂಜುನಾಥ್ ಅವರ ನಿವಾಸಗಳ ಮೇಲೂ ಶೋಧಕಾರ್ಯಾಚರಣೆ ನಡೆಯುತ್ತಿದೆ. ಸಚಿವರ ಆಪ್ತರ ಮನೆಗಳಲ್ಲಿ ಪರಿಶೀಲನೆ ವೇಳೆ ಮಹತ್ವದ ದಾಖಲೆಗಳು ಪತ್ತೆಯಾಗಿವೆ. ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ ೧೯೯೯ರ ಅಡಿಯಲ್ಲಿ ಸಚಿವ ಸತೀಶ್ ಜಾರಕಿಹೊಳಿ ಮತ್ತು ಅವರ ಆಪ್ತ ಸಹಚರರ ನಿವಾಸಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಲಾಗಿದೆ ಎಂದು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ತಿಳಿಸಿದ್ದಾರೆ. ವಿದೇಶಗಳಲ್ಲಿ ನಡೆಸಲಾದ ಅಕ್ರಮ ಹೂಡಿಕೆಗಳು ಮತ್ತು ಹಣಕಾಸು ವಹಿವಾಟುಗಳನ್ನು

ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ. ವಿದೇಶಿ ಹೂಡಿಕೆಗಳು, ನಿಧಿ ವರ್ಗಾವಣೆ, ಆಸ್ತಿಗಳು ಮತ್ತು ಇತರ ಹಣಕಾಸು ವಹಿವಾಟುಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

<><><><>

ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ನಿವಾಸದ ಮೇಲೆ ನಡೆದ ದಾಳಿ ರಾಜಕೀಯ ಪ್ರೇರಿತವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಭಾವಿ ಪರಿಶಿಷ್ಟ ನಾಯಕನನ್ನು ಗುರಿಯಾಗಿಸಿಕೊಂಡು ಈ ದಾಳಿ ನಡೆದಿದೆ ಎಂದು ತಿಳಿಸಿದ್ದಾರೆ. ಅಬಕಾರಿ ಇಲಾಖೆಯ ಅಧಿಕಾರಿ ವೈ.ಮಂಜುನಾಥ್ ಅವರಿಗೆ ಸಂಬಂಧಿಸಿದ ಬಿಜೆಪಿ ಶಾಸಕರ ಆಸ್ತಿಗಳನ್ನು ಇಡಿ ಅಧಿಕಾರಿಗಳು ಯಾಕೆ ಶೋಧ ನಡೆಸಿಲ್ಲ ಎಂದು ಪ್ರಶ್ನಿಸಿದ್ದಾರೆ. ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯಿಸಿ, ಇದು ರಾಜಕೀಯ ದಾಳಿಯಾಗಿದ್ದು, ವಿರೋಧ ಪಕ್ಷದ ನಾಯಕರನ್ನು ಗುರಿಯಾಗಿಸುವ ಕಾರ್ಯತಂತ್ರದ ಭಾಗವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಮುಂದಿನ ದಿನಗಳಲ್ಲಿ ತಮ್ಮ ಹಾಗೂ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಿವಾಸದ ಮೇಲೆ ದಾಳಿಯಾಗುವ ನಿರೀಕ್ಷೆಯಿದೆ ಎಂದು ತಿಳಿಸಿದ್ದಾರೆ.

<><><><>

ತಮಿಳುನಾಡಿಗೆ ಪ್ರತಿದಿನ ೬ ಸಾವಿರ ಕ್ಯೂಸೆಕ್ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ  ಹಾಗೂ ಪ್ರಾಧಿಕಾರ  ನೀಡಿರುವ ಆದೇಶ ಪ್ರಶ್ನಿಸಿ ರಾಜ್ಯ ಸರ್ಕಾರ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ನಿರ್ಧರಿಸಿದೆ ಎಂದು ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಸ್ಪಷ್ಟಪಡಿಸಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,  ಈ ವಿಚಾರವಾಗಿ ಮುಖ್ಯಮಂತ್ರಿಗಳ ಜೊತೆ ಸುದೀರ್ಘ ಚರ್ಚೆ ನಡೆಸಲಾಗಿದೆ. ಕಾನೂನು ತಜ್ಞರ ತಂಡದೊಂದಿಗೆ ಸಮಾಲೋಚಿಸಿ ನಾಳೆಯೇ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ.  ಇದರ ಜೊತೆಗೆ ಕಾವೇರಿ ನೀರು ನಿಯಂತ್ರಣ ಸಮಿತಿ ಮುಂದೆಯೂ ಮರುಪರಿಶೀಲನಾ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ. ಕಾವೇರಿ ವಿಚಾರದಲ್ಲಿ ರಾಜ್ಯದ ಹಿತ ಕಾಪಾಡಲು, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಸಲಹೆ ನೀಡಿರುವಂತೆ ಸುಪ್ರೀಂಕೋರ್ಟ್‌ನಲ್ಲಿ ವಾದ ಮಂಡಿಸಲು ವಿಶೇಷ ವಕೀಲರನ್ನು ನೇಮಿಸುವ ಕುರಿತು ಸರ್ಕಾರ ಗಂಭೀರವಾಗಿ ಚಿಂತನೆ ನಡೆಸಿದೆ. ಜೊತೆಗೆ

ಬೊಮ್ಮಾಯಿ ಅವರೊಂದಿಗೂ ಚರ್ಚಿಸಲಾಗುವುದು ಎಂದು ಸಚಿವ ಚಲುವರಾಯಸ್ವಾಮಿ ಸ್ಪಷ್ಟಪಡಿಸಿದ್ದಾರೆ.

<><><>

ಕಾವೇರಿ ನೀರಿನ ವಿಚಾರದಲ್ಲಿ ರಾಜ್ಯ ಸರ್ಕಾರ ಕೈಚೆಲ್ಲಿ ಕೂತಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಕೂಡಲೇ ಸಿಡಬ್ಲ್ಯುಆರ್‌ಸಿ ಆದೇಶದ ವಿರುದ್ಧ ಸುಪ್ರೀಂಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸುವಂತೆ ಆಗ್ರಹಿಸಿದ್ದಾರೆ. ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಕಾವೇರಿ ವಿಷಯದಲ್ಲಿ ರಾಜ್ಯದ ಹಿತ ಕಾಪಾಡುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ದೂರಿದ್ದಾರೆ. ರಾಜ್ಯದ ಹಿತಾಸಕ್ತಿ ಕಾಪಾಡಲು ಪ್ರಾಧಿಕಾರದ ಮುಂದೆ ಸರ್ಕಾರ ಮಂಡಿಸಿರುವ ದಾಖಲೆಗಳು ಯಾವುದು ಎಂಬುದನ್ನು ಬಹಿರಂಗಗೊಳಿಸುವಂತೆ ಆಗ್ರಹಿಸಿದ್ದಾರೆ. ಸರ್ಕಾರ ಕೂಡಲೇ ಕಾನೂನು ಹೋರಾಟ ನಡೆಸುವಂತೆ ಒತ್ತಾಯಿಸಿದ್ದಾರೆ.

<><><>

ಭಾರತ್ ಜೊಡೋ ಯಾತ್ರೆಯ ೩ನೇ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಒಗ್ಗಟ್ಟಿನ ಭಾರತದ ಸಂದೇಶ ಸಾರುವಲ್ಲಿ ಭಾರತ್ ಜೊಡೋ ಯಾತ್ರೆ ಪ್ರಮುಖ ಪಾತ್ರ ವಹಿಸಿದೆ ಎಂದು ತಿಳಿಸಿದ್ದಾರೆ. ಈ ಯಾತ್ರೆಯು ದೇಶದ ಐಕ್ಯತೆ, ಸಮಗ್ರತೆ ಹಾಗೂ ಸೌಹಾರ್ದತೆಯನ್ನು ಬಲಪಡಿಸುವುದರ ಜೊತೆಗೆ ಜನ ಸಾಮಾನ್ಯರ ಸಮಸ್ಯೆಗಳನ್ನು ನೇರವಾಗಿ ಆಲಿಸುವ ಉದ್ದೇಶದಿಂದ ರಾಹುಲ್ ಗಾಂಧಿ ಕೈಗೊಂಡ ಐತಿಹಾಸಿಕ ಜನಾಂದೋಲನವಾಗಿತ್ತು ಎಂದು ಅಭಿಪ್ರಾಯಪಟ್ಟಿದ್ದಾರೆ.

<><><>

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಹಿನ್ನೆಲೆಯಲ್ಲಿ ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಭಾರತ ರತ್ನ ಪ್ರೊಫೆಸರ್ ಸಿ.ಎನ್.ಆರ್.ರಾವ್ ಅವರಿಗೆ ಯಾವುದೇ ನೋಟಿಸ್ ಜಾರಿ ಮಾಡಿಲ್ಲ ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸ್ಪಷ್ಟಪಡಿಸಿದ್ದಾರೆ. ಕೆಲ ಮಾಧ್ಯಮಗಳಲ್ಲಿ ಬಂದಿರುವ ಸುದ್ದಿ ಸುಳ್ಳು ಎಂದು ತಿಳಿಸಿದ್ದಾರೆ. ೨೦೦೨ನೇ ಸಾಲಿನ ಮತದಾರರ ಪಟ್ಟಿಯಲ್ಲಿ ಸಿ.ಎನ್.ಆರ್.ರಾವ್ ಹೆಸರು ರಾಮ ಎಂದು ನಮೂದಾಗಿತ್ತು. ಪ್ರಸ್ತುತ ಅವರು, ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರದ ಸಂಖ್ಯೆ-೩೯ರಲ್ಲಿ ಪ್ರೊಫೆಸರ್ ಸಿ.ಎನ್.ಆರ್.ರಾವ್ ಎಂ. ಎಂಬ ಹೆಸರಿನೊಂದಿಗೆ ಮತದಾರರಾಗಿ ನೋಂದಾಯಿತರಾಗಿದ್ದಾರೆ. ಅದರಂತೆ ಕರಡು ಮತದಾರರ ಪಟ್ಟಿಯಲ್ಲಿಯೂ ಅವರ ಹೆಸರು ಸೇರ್ಪಡೆಯಾಗಿದೆ ಎಂದು ತಿಳಿಸಿದ್ದಾರೆ.

<><><>

ರಾಜ್ಯ ಸರ್ಕಾರದ ಆಡಳಿತ ವೈಫಲ್ಯದ ವಿರುದ್ಧ ಬಿಜೆಪಿ ಆರಂಭಿಸಿರುವ ಬಳ್ಳಾರಿ ಚಲೋ ಪಾದಯಾತ್ರೆ ೯ನೇ ದಿನಕ್ಕೆ ಕಾಲಿಟ್ಟಿದೆ. ಇಂದು ಬಳ್ಳಾರಿ ತಾಲೂಕಿನ ಕುಡಿತಿನಿ ಗ್ರಾಮದಿಂದ ಆರಂಭಗೊಂಡ ಪಾದಯಾತ್ರೆ ರಾಮೇಶ್ವರಿ ನಗರಕ್ಕೆ ಬಂದು ತಲುಪಿದೆ. ನಾಳೆ ಸಮಾರೋಪ ಸಮಾವೇಶ ನಡೆಯಲಿದೆ. ಪಾದಯಾತ್ರೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮುಖಂಡರಾದ ನಳಿನ್ ಕುಮಾರ್ ಕಟೀಲ್, ಸುರೇಶ್ ಕುಮಾರ್, ಹರೀಶ್ ಪೂಂಜಾ, ಶ್ರೀರಾಮುಲು, ಜನಾರ್ದನರೆಡ್ಡಿ ಸೇರಿದಂತೆ ಹಲವು ಬಿಜೆಪಿ ನಾಯಕರು ಭಾಗಿಯಾಗಿದ್ದರು.

<><><>

ಮೈಸೂರು ದಸರಾ ಮಹೋತ್ಸವದ ಜಂಬೂ ಸವಾರಿಯ ವೇಳೆ ಕನ್ನಡ ಚಲನಚಿತ್ರ ರಂಗದ ಪ್ರಖ್ಯಾತ ಕಲಾವಿದರು ಭಾಗಿಯಾಗಲಿದ್ದಾರೆ ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದ್ದಾರೆ. ಚಲನಚಿತ್ರ ರಂಗದ ಪದಾಧಿಕಾರಿಗಳ ಜೊತೆ ಇಂದು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಗಳ ಆಶಯದಂತೆ ಕನ್ನಡ ಚಲನಚಿತ್ರ ರಂಗದ ಪ್ರಖ್ಯಾತ ನಟ ನಟಿಯರು ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಿದ ಕ್ರೀಡಾಪಟುಗಳನ್ನು ಅಂಬಾರಿ ಬಸ್‌ನಲ್ಲಿ ಅರಮನೆ ಆವರಣದಿಂದ ಕೆ.ಆರ್.ಸರ್ಕಲ್‌ವರೆಗೆ ಮೆರವಣಿಗೆ ಮೂಲಕ ಕರೆದುಕೊಂಡು ಹೋಗಲಾಗುವುದು ಎಂದು ತಿಳಿಸಿದ್ದಾರೆ. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷೆ, ನಟಿ ಡಾ.ಜಯಮಾಲಾ ಮಾತನಾಡಿ, ಕನ್ನಡ ಚಿತ್ರರಂಗವು ೯೩ ವರ್ಷಗಳಿಂದ ನಡೆದು ಬಂದ ಹಾದಿ ಕುರಿತ ಮಾಹಿತಿಯನ್ನು ಹೊತ್ತ ಸ್ತಬ್ಧ ಚಿತ್ರ ನಿರ್ಮಾಣ ಮಾಡಲಾಗುವುದು ಎಂದು ತಿಳಿಸಿದ್ದಾರೆ.

<><><>

ನಿಮ್ಹಾನ್ಸ್ ಸಹಯೋಗದೊಂದಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಬೆಂಬಲವನ್ನು ಬಲಪಡಿಸಲು ರಾಜ್ಯಾದ್ಯಂತ ಉಪಕ್ರಮ ಕೈಗೊಳ್ಳಲಾಗಿದೆ. ಈ ಉಪಕ್ರಮದ ಭಾಗವಾಗಿ ನಿಮ್ಹಾನ್ಸ್ ರಾಜ್ಯದ ಹಲವು ಕಾಲೇಜುಗಳಲ್ಲಿ ಒಂದು ದಿನದ ಉಪನ್ಯಾಸ ಕಾರ್ಯಕ್ರಮ ಆಯೋಜಿಸಿದೆ. ಅಭಯ ಎಂಬ ಶೀರ್ಷಿಕೆಯ ಈ ಕಾರ್ಯಕ್ರಮವನ್ನು ಆಗಸ್ಟ್ ೧೧ ರಂದು ಬೆಂಗಳೂರಿನ ನಿಮ್ಹಾನ್ಸ್ ಕನ್ವೆನ್ಷನ್ ಸೆಂಟರ್‌ನಲ್ಲಿ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಬೆಂಗಳೂರು, ಮೈಸೂರು, ಶಿವಮೊಗ್ಗ ಮತ್ತು ಮಂಗಳೂರು ಪ್ರಾದೇಶಿಕ ಕಚೇರಿಗಳ ವ್ಯಾಪ್ತಿಗೆ ಬರುವ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಪ್ರಾಂಶುಪಾಲರು ಭಾಗವಹಿಸಿದ್ದರು.

<><><>

ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಕಾವೇರಿ ವನ್ಯಜೀವಿಧಾಮದಲ್ಲಿ ಆಗಸ್ಟ್ ೧೫ರಂದು ನಡೆದಿದ್ದ ಶೂಟೌಟ್ ಪ್ರಕರಣಕ್ಕೆ ಸಂಬಂಧಿಸಿದಂತೆ ಅರಣ್ಯ ರಕ್ಷಕ ಶಿವರಾಜ್ ಸಾಸಲವಾಡೆ, ಅರಣ್ಯ ವೀಕ್ಷಕ ಶಿವಲಿಂಗ ನಾಯ್ಕ ಮತ್ತು ಗಿರೀಶ್ ಅವರಿಗೆ ಕೊಳ್ಳೇಗಾಲದ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ. ಹೊಳೆ ಮುರಿದಟ್ಟಿ ಅರಣ್ಯ ಪ್ರದೇಶದಲ್ಲಿ ನಡೆದ ಗುಂಡಿನ ಚಕಮಕಿಯಲ್ಲಿ ಅಂತೋಣಿಸ್ವಾಮಿ, ಡೇವಿಡ್ ಕುಮಾರ್ ಮತ್ತು ಜಾನ್ ರೋಸ್ ಪೀಟರ್ ಎಂಬುವವರು ಮೃತಪಟ್ಟಿದ್ದರು. ಘಟನೆ ಸಂಬಂಧ ಸಿಐಡಿ ತನಿಖೆ ನಡೆಯುತ್ತಿದೆ.

<><><><>

ಸಂಕ್ಷಿಪ್ತ ಸುದ್ದಿಗಳು

೧. ಗ್ರಾಮೀಣ ಪ್ರದೇಶದ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಜಲಜೀವನ್ ಮಿಷನ್ ಸೇರಿದಂತೆ ವಿವಿಧ ಯೋಜನೆಗಳ ಕಾಮಗಾರಿಗಳನ್ನು ಡಿಸೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸಬೇಕು ಎಂದು ವಿಜಯಪುರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>